230

# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/SC/ಹೊ.ಕೋ.& ಸಂ.ನ./2025-26

ಜ್ಞಾನಭಾರತಿ
ಬೆಂಗಳೂರು-560 056
ದಿನಾಂಕ:11.11.2025 14

## ಅಧಿಸೂಚನೆ

ವಿಷಯ : 2025-26ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಮತ್ತು ಹೊಸ ಕೋರ್ಸುಗಳಿಗೆ ಸಂಯೋಜನೆ ನೀಡುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾಲಯದ ಅಧಿಸೂಚನೆ ಸಂಖ್ಯೆ: ಎಸಿಎ-3:ಸಂ.ನ: 2025-26 ದಿನಾಂಕ: 24.10.2024.
2. ಸರ್ಕಾರದ ಪತ್ರದ ಸಂಖ್ಯೆ ಇಡಿ 272 ಯುಬಿವಿ 2025, ದಿನಾಂಕ 02.08.2025.
3. ಕುಲಪತಿಯವರ ಅನುಮೋದನೆ ದಿನಾಂಕ:14.11.2025.

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ವಿಶ್ವವಿದ್ಯಾಲಯವು, 2025-26ನೇ ಸಾಲಿಗೆ **ಸುರಾನ ಕಾಲೇಜು**, ನಡೆಸುತ್ತಿರುವ ಈ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರೆಸಿದೆ.

| **ಕೋರ್ಸು** ***(Programme)*** | **ವಿಷಯವಾರು** ***( Subject / Combination)*** | **ವಿದ್ಯಾರ್ಥಿ ಪ್ರಮಾಣ** |
|---|---|---|
| ಬಿ.ಎ. | ಅರ್ಥಶಾಸ್ತ್ರ, ಇತಿಹಾಸ, ರಾಜ್ಯಶಾಸ್ತ್ರ | 60 (ಅರವತ್ತು)* |
| | ಅರ್ಥಶಾಸ್ತ್ರ, ಇತಿಹಾಸ, ಪತ್ರಿಕೋದ್ಯಮ | 60 (ಅರವತ್ತು)* |
| ಬಿ.ಬಿ.ಎ. | ವಿಶ್ವವಿದ್ಯಾಲಯ ಪರಿನಿಯಮಾವಳಿಯಂತೆ | 60 (ಅರವತ್ತು)* |
| ಬಿ.ಕಾಂ. | ವಿಶ್ವವಿದ್ಯಾಲಯ ಪರಿನಿಯಮಾವಳಿಯಂತೆ | 80(ಎಂಭತ್ತು)* |
| ಬಿ.ಎಸ್ಸಿ | ಸಸ್ಯಶಾಸ್ತ್ರ, ರಸಾಯನಶಾಸ್ತ್ರ, ಪರಿಸರ ವಿಜ್ಞಾನ | 40(ನಲವತ್ತು)* |
| | ರಸಾಯನಶಾಸ್ತ್ರ, ಗಣಿತಶಾಸ್ತ್ರ, ಭೌತಶಾಸ್ತ್ರ | 40(ನಲವತ್ತು)* |
| ಬಿ.ಸಿ.ಎ. | ಕಂಪ್ಯೂಟರ್ ಅಪ್ಲಿಕೇಷನ್ | 60*+60=120 (ನೂರ ಇಪ್ಪತ್ತು) |

***ಆಸ್ಟ್ರಿಕ್ ಗುರುತುಳ್ಳ ಕೋರ್ಸುಗಳು 2024-25ನೇ ಸಾಲಿನಿಂದ 2028-29 ಸಾಲಿನವರೆಗೆ ಐದು ವರ್ಷಗಳ ಶಾಶ್ವತ ಸಂಯೋಜನೆಯನ್ನು ಹೊಂದಿದೆ. ವಿ.ವಿ.ಅಧಿಸೂಚನೆ ಸಂಖ್ಯೆ:ಎಸಿಎ-3/ಎ3/sc/ಶಾ.ಸಂ./2024-25, ದಿನಾಂಕ:22.10.2024.**

ಉಲ್ಲೇಖ(2)ರ ಸರ್ಕಾರದ ಅನುಮೋದನೆಯನ್ವಯ, ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59(11)ನೇ ಪ್ರಕರಣದ ಉಪಬಂಧರಡಿಯಲ್ಲಿ 2025-26ನೇ ಸಾಲಿಗೆ ಈ ಕೆಳಗೆ ನಮೂದಿಸಿರುವ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಸಂಯೋಜನೆಯನ್ನು ಮಂಜೂರು ಮಾಡಲಾಗಿದೆ.

| ಕೋರ್ಸು *(Programme)* | ವಿಷಯವಾರು *( Subject / Combination)* | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಸಿ.ಎ. | ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ಅಂಡ್ ಮಷೀನ್ ಲರ್ನಿಂಗ್ | 60 (ಅರವತ್ತು) |

**ವಿ.ಸೂ: 2025-26ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟ್ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ, ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.**

**ಷರತ್ತುಗಳು:**

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್‌ಇ 2021 ದಿನಾಂಕ: 02.02.2021 ರಲ್ಲಿ ಸೂಚಿಸಿರುವಂತೆ ಕಾಲೇಜುಗಳು ಮುಂದಿನ ಆರು ತಿಂಗಳ ಒಳಗಾಗಿ ಸ್ಥಳೀಯ ವಿಚಾರಣ ಸಮಿತಿಯ ವರದಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಎಂಟು *Defined Parameters* ಗಳನ್ನು ಪೂರೈಸಲು ಕ್ರಮವಹಿಸತಕ್ಕದ್ದು.
3. ಸರ್ಕಾರವು ನಿರ್ದೇಶಿಸಿರುವಂತೆ ಸಂಯೋಜಿತ ಕೋರ್ಸುಗಳಿಗೆ ಕಡ್ಡಾಯವಾಗಿ ಸರ್ಕಾರದ *UUCMS* ಪೋರ್ಟಲ್ ಮೂಲಕವೇ ಪ್ರವೇಶಾತಿಯನ್ನು ಮಾಡತಕ್ಕದ್ದು.
4. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
5. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
6. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
7. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆ ಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

8. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸುವ ಪ್ರವೇಶ ಮತ್ತು ಇತರೆ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.
9. ವೈಶಾಕ V/s ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13.08.1997 ರ ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿ ದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು/ ಚಟುವಟಿಕೆಗಳನ್ನು ಮಟ್ಟ ಹಾಕಲು ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.
10. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
11. ವಿದ್ಯಾರ್ಥಿಗಳು ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.
12. ಕಾಲೇಜು ವಿದ್ಯಾರ್ಥಿಗಳ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ ಹಾಗೂ ಇತರೆ ದಾಖಲೆಗಳನ್ನು ಮೂರು ತಿಂಗಳ ಅವಧಿಯೊಳಗೆ ವಿದ್ಯಾರ್ಥಿಗಳಿಗೆ ನೀಡಬೇಕು. ಅವಧಿ ಮೀರಿದ ನಂತರ ತಮ್ಮಲ್ಲಿಯೇ ಉಳಿದುಕೊಂಡಿರುವ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತ್ರಗಳ ಬಗ್ಗೆ ಕುಲಸಚಿವರು (ಮೌಲ್ಯಮಾಪನ) ಇವರಿಗೆ ವರದಿ ನೀಡತಕ್ಕದ್ದು.
13. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.
14. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.
15. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.
16. 2026-27ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.
17. ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್ (NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.
18. ಕಾಲೇಜಿನಲ್ಲಿ ಅರ್ಹತೆಯುಳ್ಳ ಗ್ರಂಥಪಾಲಕರು ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರನ್ನು ನೇಮಿಸದಿದ್ದಲ್ಲಿ, ಕಡ್ಡಾಯವಾಗಿ ನೇಮಿಸತಕ್ಕದ್ದು.
19. ಕಾಲೇಜಿನಲ್ಲಿ ಸಂವಿಧಾನ ಪೀಠಿಕೆಯನ್ನು ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.

20. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಅಧ್ಯಯನ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆದೇಶದ ಮೇರೆಗೆ

Digitally signed by
SHANTHALA K T
Date: 14-11-2025
16:20:58

**ಕುಲಸಚಿವರು**

**ಗೆ,**
**ಪ್ರಾಂಶುಪಾಲರು,**
**ಸುರಾನಾ ಕಾಲೇಜು,**
**ನಂ.167, 5ನೇ ಮುಖ್ಯರಸ್ತೆ**
**ಇಂಡಸ್ಟ್ರಿಯಲ್ ಸಬರ್ಬ್ಸ್,**
**2ನೇ ಹಂತ, ಪೀಣ್ಯ**
**ಬೆಂಗಳೂರು-560 022.**
**UUCMS Code : P20GMF0260.**

**ಪ್ರತಿಗಳು:**
1. ಸರ್ಕಾರದ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-560 056.
3. ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056.
4. ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು ಶೈಕ್ಷಣಿಕ ವಿಭಾಗ-1/4, ಬೆಂ.ವಿ.ವಿ. ಬೆಂಗಳೂರು-560 056.
5. ಅಧೀಕ್ಷಕರು, ಕಾನ್ಫಿಡೆನ್ಶಿಯಲ್ ವಿಭಾಗ, ಪರೀಕ್ಷಾ ವಿಭಾಗ, ಬೆಂ.ವಿ.ವಿ., ಬೆಂಗಳೂರು-560 056.
6. ಐ.ಟಿ. ಕೋಆರ್ಡಿನೇಟರ್, ಯು.ಯು.ಸಿ.ಎಂ.ಎಸ್., ಬೆಂ.ವಿ.ವಿ, ಬೆಂಗಳೂರು-560 056.
7. ಸಹಾಯಕ ನಿರ್ದೇಶಕರು, ಅಂಕಿ ಅಂಶಗಳ ವಿಭಾಗ, ಬೆಂ.ವಿ.ವಿ., ಬೆಂಗಳೂರು-560 056.